ಇ) ಅಪ್ರೋಚ್ ರಸ್ತೆಯು ಸೇರಿದಂತೆ ರಸ್ತೆ ಮೇಲು ಸೇತುವೆ ನಿರ್ಮಾಣ ಕಾರ್ಯವನ್ನು ಸಂಯುಕ್ತ ಯೋಜನೆಯಾಗಿ ರೈಲ್ವೆಯವರು ಕೈಗೊಳ್ಳುವರು. ಯೋಜನೆಯು ಪೂರ್ಣಗೊಂಡ ನಂತರ ಸೇತುವೆಯ ನಿರ್ವಹಣೆ ರೈಲ್ವೆಯವರು ನೋಡಿಕೊಳ್ಳುವರು ಮತ್ತು ಅಪ್ರೋಚ್ ರಸ್ತೆ ನಿರ್ವಹಣೆ ರಾಜ್ಯ ಸರ್ಕಾರದ/ಸ್ಥಳೀಯ ಸಂಸ್ಥೆಗಳಿಂದ ನಿರ್ವಹಿಸಲಾಗುವುದು.

ಮೊರಾರ್ಜಿ ವಸತಿ ಶಾಲೆಗೆ ಸ್ವಂತ ಕಟ್ಟಡ ಒದಗಿಸುವ ಕುರಿತು :

445 (5489) ಶ್ರೀ ಕಳಕಪ್ಪ ಗುರುಶಾಂತಪ್ಪ ಬಂಡಿ (ರೋಣ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರೋಣ ತಾಲ್ಲೂಕಿನ ಕಾಲಕಾಲೇಶ್ವರ ಗ್ರಾಮದಲ್ಲಿ 1996ರಲ್ಲಿ ಮೊರಾರ್ಜಿ ವಸತಿ ಶಾಲೆ ಪ್ರಾರಂಭವಾಗಿದ್ದು, ಈವರೆವಿಗೆ ಸ್ವಂತ ಕಟ್ಟಡವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಹಾಗಿದ್ದಲ್ಲಿ ಸ್ವಂತ ಕಟ್ಟಡ ಒದಗಿಸಿಕೊಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

1) ಹೌದು.

2) ರಾಜೂರು ಗ್ರಾಮದ ಸರ್ವೆ ನಂಬರ್ 63/1ರಲ್ಲಿ 9 ಎಕರೆ 6 ಗುಂಟೆ ಜಮೀನು ಖರೀದಿಸಲು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಗದಗ್, ಇವರಿಗೆ ಈಗಾಗಲೇ ಅನುಮತಿ ನೀಡಿದೆ. ಜಮೀನನ್ನು ಖರೀದಿಸಿ ಇಲಾಖೆಗೆ ವರ್ಗಾವಣೆಯಾದ ತಕ್ಷಣ ಅನುದಾನದ ಲಭ್ಯತೆಗೆ ಅನುಗುಣವಾಗಿ ಕಟ್ಟಡ ನಿರ್ಮಾಣ ಮಾಡಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಗದಗ್ ತಾಲ್ಲೂಕು ಮುಳಗುಂದ ಪಟ್ಟಣಕ್ಕೆ ಮುರಾರ್ಜಿ ವಸತಿ ಶಾಲೆ ಕಟ್ಟಡ :

447 (4501) ಶ್ರೀ ಪಾಟೀಲ್ ಎಸ್.ಎಸ್. (ಮುಂಡರಗಿ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ಜಿಲ್ಲೆ ಗದಗ್ ತಾಲ್ಲೂಕು ಮುಳಗುಂದ ಪಟ್ಟಣದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ ಕಟ್ಟಡವಿದೆಯೇ;

ಆ) ಕಟ್ಟಡವಿಲ್ಲದಿದ್ದರೆ, ಕಟ್ಟಡ ಕಟ್ಟಲು ಏನು ಕ್ರಮ ಕೈಗೊಳ್ಳಲಾಗಿದೆ ಮತ್ತು ಕಟ್ಟಡ ಯಾವಾಗ ಒದಗಿಸಲಾಗುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಸ್ವಂತ ಕಟ್ಟಡವಿರುವುದಿಲ್ಲ ಬಾಡಿಗೆ ಕಟ್ಟಡದಲ್ಲಿ ವಸತಿ ಶಾಲೆ ನಡೆಯುತ್ತಿದೆ.

ಆ) ಮಂಜೂರಾದ ನಿವೇಶನವು ಕೆರೆ ಅಂಗಳವಾಗಿದ್ದು, ಕಟ್ಟಡ ನಿರ್ಮಾಣಕ್ಕೆ ಸೂಕ್ತವಲ್ಲದ ಕಾರಣ, ಖರೀದಿಗೆ ಜಮೀನನ್ನು ಗುರುತಿಸಿ ಜಿಲ್ಲಾಧಿಕಾರಿಗಳ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡಲು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಗದಗ್ ರವರಿಗೆ ಸೂಚನೆ ನೀಡಲಾಗಿದೆ. ನಿವೇಶನ ದೊರೆತ ತಕ್ಷಣ ಅನುದಾನದ ಲಭ್ಯತೆಗನುಗುಣವಾಗಿ ಕಟ್ಟಡ ನಿರ್ಮಾಣ ಮಾಡಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಧಾರವಾಡ ಜಿಲ್ಲೆಯಲ್ಲಿ ಪಶುಸಂಗೋಪನೆ ಆಸ್ಪತ್ರೆಗಳ ವಿವರಗಳು :

448 (5114) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದುಗೋಳ) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಪಶುಸಂಗೋಪನೆ ಆಸ್ಪತ್ರೆಗಳು ಎಷ್ಟು; ಈಗ ಧಾರವಾಡ ಜಿಲ್ಲೆಯಲ್ಲಿ ಪಶು ಸಂಗೋಪನೆ ಆಸ್ಪತ್ರೆಗಳ ಕೊರತೆಯು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೊಸದಾಗಿ ಆಸ್ಪತ್ರೆಗಳನ್ನು ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಇ) ಧಾರವಾಡ ಜಿಲ್ಲೆಯಲ್ಲಿ ಪಶುಸಂಗೋಪನೆ ಆಸ್ಪತ್ರೆಗಳಲ್ಲಿ ಪಶು ವೈದ್ಯರ ಕೊರತೆಯೆಷ್ಟು; ಅವುಗಳನ್ನು ತುಂಬಲು ಸರ್ಕಾರದ ಕ್ರಮವೇನು?

ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಧಾರವಾಡ ಜಿಲ್ಲೆಯಲ್ಲಿ ಒಟ್ಟು 110 ವಿವಿಧ ಪಶುವೈದ್ಯಕೀಯ ಸಂಸ್ಥೆಗಳಿದ್ದು ವಿವರಗಳು ಕೆಳಕಂಡಂತಿದೆ :–

ತಾಲ್ಲೂಕು	ಪಶು ಆಸ್ಪತ್ರೆ	ಪಶು ಚಿಕಿತ್ಸಾಲಯ	ಸಂಚಾರಿ ಪಶು ಚಿಕಿತ್ಸಾಲಯ	ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು	ಕೃತಕ ಗರ್ಭಧಾರಣಾ ಕೇಂದ್ರಗಳು	ಒಟ್ಟು
ಧಾರವಾಡ	2	8	1	8	11	30
ಹುಬ್ಬಳ್ಳಿ	1	9	1	5	8	34
ಕುಂದಗೋಳ	1	6	1	4	9	21
ಕಲಘಟಗಿ	1	5	1	1	9	17
ನವಲಗುಂದ	1	6	1	4	6	18
ಒಟ್ಟು	6	34	5	22	43	110

ಧಾರವಾಡ ಜಿಲ್ಲೆಯಲ್ಲಿ 2,97,165 ಜಾನುವಾರು ಘಟಕಗಳಿದ್ದು 59 ಪಶುವೈದ್ಯಕೀಯ ಸಂಸ್ಥೆಗಳ ಅವಶ್ಯಕತೆ ಇರುತ್ತದೆ. ಜಿಲ್ಲೆಯಲ್ಲಿ ಒಟ್ಟು 110 ಪಶುವೈದ್ಯಕೀಯ ಸಂಸ್ಥೆಗಳಿರುವ ಕಾರಣ ಕೊರತೆ ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಧಾರವಾಡ ಜಿಲ್ಲೆಯಲ್ಲಿ ಒಬ್ಬರು ಸಹಾಯಕ ನಿರ್ದೇಶಕರು ಹಾಗೂ 19 ಪಶುವೈದ್ಯಾಧಿಕಾರಿಗಳು ಸೇರಿದಂತೆ ಒಟ್ಟು 20 ಪಶುವೈದ್ಯರ ಹುದ್ದೆ ಖಾಲಿ ಇರುತ್ತದೆ. ವಿವರಗಳು ಕೆಳಕಂಡಂತಿರುತ್ತದೆ.

ತಾಲ್ಲೂಕು	ಸಹಾಯಕ ನಿರ್ದೇಶಕರು	ಪಶುವೈದ್ಯಾಧಿಕಾರಿಗಳು	ಒಟ್ಟು
ಧಾರವಾಡ	–	3	3
ಹುಬ್ಬಳ್ಳಿ	–	2	2
ಕುಂದಗೋಳ	–	4	4
ಕಲಘಟಗಿ	1	5	6
ನವಲಗುಂದ	–	5	5
ಒಟ್ಟು	**1**	**19**	**20**

ಖಾಲಿ ಇರುವ ಹುದ್ದೆಗಳ ತುಂಬುವ ದಿಸೆಯಲ್ಲಿ 60 ಪಶುವೈದ್ಯಾಧಿಕಾರಿಗಳಿಗೆ ಆದೇಶ ಸಂಖ್ಯೆ : ಪಸಂಮೂ 207 ಪಅಸೆ 2004 ದಿನಾಂಕ : 24–05–2005 ರಲ್ಲಿ ಸಹಾಯಕ ನಿರ್ದೇಶಕರಾಗಿ ಮುಂಬಡ್ತಿ ನೀಡಲಾಗಿದೆ.

ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ 191 ಪಶುವೈದ್ಯಾಧಿಕಾರಿಗಳ ಸೇವೆಯನ್ನು ಸರ್ಕಾರದ ಆದೇಶ ಸಂಖ್ಯೆ ಪಸಂಮೂ 116 ಪಸಸೆ 2003 ದಿನಾಂಕ : 30–05–05ರಲ್ಲಿ ಸಕ್ರಮಗೊಳಿಸಲಾಗಿದೆ. 250 ಪಶುವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿ ನಿಯಮದಡಿ ಭರ್ತಿ ಮಾಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

<u>ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯಕೀಯ ಇಲಾಖೆ ಸಿಬ್ಬಂದಿ</u> :

449 (5257) ಶ್ರೀ ಮಾಧುಸ್ವಾಮಿ ಜೆ.ಸಿ. (ಚಿಕ್ಕನಾಯಕನಹಳ್ಳಿ) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ಖಾಲಿ ಇರುವ ವೈದ್ಯರುಗಳು, ಕಾಂಪೌಂಡರ್ ಹಾಗೂ ಕಿರಿಯ ಲೆವೆಲ್ ಸ್ಟಾಫ್ ನೌಕರರ ಹುದ್ದೆಗಳ ಸಂಖ್ಯೆ ಎಷ್ಟು;